# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ. ಮಾದೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 2111 (2386) |
| ಉತ್ತರಿಸಬೇಕಾದ ಸಚಿವರು | : | ಕೃಷಿ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 27-03-2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನ ಮತ್ತು ಅರಣ್ಯ ಕಾಲೇಜುಗಳು ಮರು ಸಂಘಟಿಸಲು ರಚಿಸಲಾಗಿದ್ದ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ, ಸಲ್ಲಿಸಿದ್ದಲ್ಲಿ ಯಾವ ದಿನಾಂಕದಂದು ವರದಿ ಸಲ್ಲಿಸಲಾಗಿದೆ. | ರಾಜ್ಯದಾದ್ಯಂತ ಕೃಷಿ, ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳು ಮರು ಸಂಘಟಿಸಲು ರಚಿಸಲಾಗಿದ್ದ ತಜ್ಞರ ಸಮಿತಿಯು **ದಿನಾಂಕ: 04.09.2025**ರಂದು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. |
| ಆ | ಸಮಿತಿಯು ನೀಡಿರುವ ವರದಿಯಲ್ಲಿನ ಶಿಫಾರಸ್ಸುಗಳೇನು? (ವರದಿ ಪ್ರತಿಯನ್ನು ಒದಗಿಸುವುದು) | ಸರ್ಕಾರದ ಆದೇಶ ಸಂಖ್ಯೆ: AGRI/11/AUB/2024, ಬೆಂಗಳೂರು, ದಿನಾಂಕ:25.03.2025ರ ಆದೇಶದಲ್ಲಿ Integrated ವಿಶ್ವವಿದ್ಯಾಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸುವುದಕ್ಕಾಗಿ ಕೃಷಿ ತೋಟಗಾರಿಕೆ, ಪಶುಸಂಗೋಪನೆ ಮತ್ತು ಅರಣ್ಯ ಕಾಲೇಜುಗಳ ಮರು ಸಂಘಟನೆ (Re-organization of Agricultural Universities) ಬಗ್ಗೆ ಶ್ರೀ ಟಿ.ಎಂ. ವಿಜಯ ಭಾಸ್ಕರ್, ಭಾ.ಆ.ಸೇ. (ನಿ), ಇವರನ್ನೊಳಗೊಂಡಂತೆ ತಜ್ಞರ ಸಮಿತಿಯನ್ನು ರಚಿಸಿ ಆದೇಶಿಸಲಾಗಿತ್ತು. ಅದರಂತೆ ತಜ್ಞರ ಸಮಿತಿಯು ದಿನಾಂಕ: 04.09.2025ರಂದು ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದೆ. ಆದರೆ ಸದರಿ ವರದಿಯಲ್ಲಿನ ಶಿಫಾರಸ್ಸುಗಳು / ಅಂಶಗಳು ಪ್ರಸ್ತುತ ಪರಿಶೀಲನೆ ಹಂತದಲ್ಲಿದ್ದು, ಸರ್ಕಾರದಿಂದ ಅಂತಿಮ ತೀರ್ಮಾನ ತೆಗೆದುಕೊಂಡಿರುವುದಿಲ್ಲ. ಈ ಹಿನ್ನಲೆಯಲ್ಲಿ, ತಜ್ಞರ ಸಮಿತಿಯು ನೀಡಿರುವ ಶಿಫಾರಸ್ಸುಗಳನ್ನು ಪ್ರಚುರಪಡಿಸುವುದು ಸಮಂಜಸವಾಗಿರುವುದಿಲ್ಲ. |
| ಇ | ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧೀನದ ಮೈಸೂರಿನ ತೋಟಗಾರಿಕೆ ಮಹಾವಿದ್ಯಾಲವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ | 2025ರ ಕರ್ನಾಟಕ ಅಧಿನಿಯಮ ಸಂಖ್ಯೆ: 37ರ ಮೂಲಕ ಕರ್ನಾಟಕ ವಿಜ್ಞಾನಗಳ ವಿಶ್ವವಿದ್ಯಾಲಯಗಳ (ತಿದ್ದುಪಡಿ) ಅಧಿನಿಯಮ 2025ರ ಪ್ರಕರಣ 9ಎ ಸೇರ್ಪಡೆಯಲ್ಲಿ "ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಮತ್ತು ಕೆಳದಿ |

| | | |
|---|---|---|
| | ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಕುರಿತು ಸರ್ಕಾರದ ಕ್ರಮಗಳೇನು? | ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗ, ಇವುಗಳ ಒಡೆತನ ಅಥವಾ ನಿರ್ವಹಣೆಯಲ್ಲಿರುವ ಎಲ್ಲಾ ಕಾಲೇಜುಗಳು, ಸಂಶೋಧನಾ ಕೇಂದ್ರ, ವಿಸ್ತರಿತ ಶಿಕ್ಷಣ ಘಟಕ, ಇತರ ಸಂಸ್ಥೆಗಳಿಗೆ ಹೊಂದಿಕೊಂಡಿರುವ ವಿದ್ಯಾರ್ಥಿನಿಲಯಗಳು, ಇತರ ಕಟ್ಟಡಗಳು, ಅವುಗಳೊಂದಿಗಿನ ಪೀಠೋಪಕರಣ ಸಾಮಗ್ರಿಗಳು, ಗ್ರಂಥಾಲಯಗಳು, ಪುಸ್ತಕಗಳು, ಪ್ರಯೋಗಾಲಯಗಳು, ದಾಸ್ತಾನುಗಳು, ಉಪಕರಣಗಳು, ಸಲಕರಣೆಗಳು, ಪರಿಕರಗಳು ಮತ್ತು ಸಾಧನಗಳು ಹಾಗೂ ಎಲ್ಲಾ ಇತರ ಚರ ಮತ್ತು ಸ್ಥಿರ ಎರಡೂ ಸ್ವತ್ತುಗಳೊಂದಿಗೆ, ಮೈಸೂರು, ಮಂಡ್ಯ, ಚಾಮರಾಜನಗರ, ಹಾಸನ ಮತ್ತು ಕೊಡಗು ಜಿಲ್ಲೆಗಳೊಳಗೆ ನೆಲೆಗೊಂಡಿರುವ ಎಲ್ಲಾ ಸ್ವತ್ತುಗಳು, ಮಾನವ ಸಂಪನ್ಮೂಲ, ಆಸ್ತಿಗಳು ಮತ್ತು ಹೊಣೆಗಾರಿಕೆಗಳು ಹಾಗೂ ಬಾಧ್ಯತೆಗಳೊಂದಿಗೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ಇಲ್ಲಿಗೆ ವರ್ಗಾವಣೆಯಾಗಿದೆ. ಇದನ್ನು ಹೊರತುಪಡಿಸಿ, ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದ ಅಧೀನದ ಮೈಸೂರಿನ ತೋಟಗಾರಿಕೆ ಮಹಾವಿದ್ಯಾಲವನ್ನು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಮಂಡ್ಯ ವ್ಯಾಪ್ತಿಗೆ ಸೇರ್ಪಡೆ ಮಾಡಿರುವುದಿಲ್ಲ. |

ಇ-ಸಂಖ್ಯೆ: AGRI/39/AUM/2026

**(ಎನ್. ಚಲುವರಾಯಸ್ವಾಮಿ)**
ಕೃಷಿ ಸಚಿವರು